ಕರ್ನಾಟಕ ವಿಧಾನ ಸಭೆ, ಸಂಶೋಧನೆ ಮತ್ತು ಉಲ್ಲೇಖನ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 01/01/2010

# ಮಾಜಿ ಸಚಿವ ನಿಧನ

ಸಂ.ಕ ಸಮಾಚಾರ, ಬೆಳಗಾವಿ 01/01/2010

ಜಿಲ್ಲೆಯ ಹಿರಿಯ ರಾಜಕಾರಣಿ, ಮಾಜಿ ಸಚಿವ ಮಲ್ಹಾರಿಗೌಡ ಪಾಟೀಲ ಮಂಗಳವಾರ ಸಂಕೇಶ್ವರದಲ್ಲಿ ನಿಧನರಾದರು.



1940, ನವೆಂಬರ್ 20ರಂದು ಜನಿಸಿದ್ದ ಅವರು ನಿಷ್ಕಳಂಕ ರಾಜಕಾರಣಿ ಎಂದೇ ಹೆಸರಾಗಿದ್ದರು. ಹಿಂದಿನ ಸಂಕೇಶ್ವರ ವಿಧಾನಸಭಾ ಕ್ಷೇತ್ರದಿಂದ ನಾಲ್ಕು ಬಾರಿ ಆಯ್ಕೆಯಾಗಿದ್ದರು. 1978ರಲ್ಲಿ ಮೊದಲ ಬಾರಿಗೆ ವಿಧಾನಸಭೆ ಪ್ರವೇಶಿಸಿದರು. 1983–85, 89ರಲ್ಲಿ ಪುನರಾಯ್ಕೆಯಾಗಿದ್ದರು. ಅವರು 1991–92ರಲ್ಲಿ ಬಂಗಾರಪ್ಪ ಸಂಪುಟದಲ್ಲಿ ನೀರಾವರಿ ಸಚಿವರಾಗಿದ್ದರು. ಮುಂಬಯಿ ಕರ್ನಾಟಕ ಭಾಗದಲ್ಲಿ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಮಹತ್ತರ ಕೊಡುಗೆ ನೀಡಿದ್ದಾರೆ. ನೇರ ನುಡಿಗೆ ಹೆಸರಾಗಿದ್ದ ಪಾಟೀಲರು ಬಂಗಾರಪ್ಪನವರ ಕಟ್ಟಾ ಬೆಂಬಲಿಗರಾಗಿದ್ದರು. ಬಂಗಾರಪ್ಪ ಕೆಸಿಪಿ ಸ್ಥಾಪಿಸಿದಾಗ ಅವರ ಬೆನ್ನಿಗೆ ನಿಂತರು. ಆದರೆ 94ರ ವಿಧಾನಸಭಾ ಚುನಾವಣೆಯಲ್ಲಿ ಕೆಸಿಪಿಯಿಂದ ಸ್ಪರ್ಧಿಸಿ ಪರಾಭವಗೊಂಡರು. ಮಲ್ಹಾರಿಗೌಡರು ಬೆಳಗಾವಿ ಜಿಲ್ಲೆಯಲ್ಲಿ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಶ್ರಮಿಸಿದ್ದರು. ಅವರ ನಿಧನದಿಂದ ಜಿಲ್ಲೆಗೆ ತುಂಬಲಾರದ ನಷ್ಟವಾಗಿದೆ ಎಂದು ಮಾಜಿ ಸಚಿವ, ಶಾಸಕ ಉಮೇಶ ಕತ್ತಿ ಸಂತಾಪ ಸೂಚಿಸಿದ್ದಾರೆ.